**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಚಿದಾನಂದ ಎಂ. ಗೌಡ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

**ವಿಷಯ**

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರುಗಳಿಗೆ ವೇತನ ಪರಿಷ್ಕರಣೆ ಮತ್ತು ಸೇವಾ ಭದ್ರತೆ ಒದಗಿಸುವ ಕುರಿತು.

**ಉತ್ತರ**

ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು 24.01.2022ರಲ್ಲಿ ಅತಿಥಿ ಉಪನ್ಯಾಸಕರಿಗೆ ನೀಡಲಾಗುತ್ತಿದ್ದ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ 15/19ಗಂಟೆಗಳ ಕಾರ್ಯಭಾರವನ್ನು ನೀಡಿ, ಈ ಹಿಂದೆ ನೀಡಲಾಗುತ್ತಿದ್ದ ರೂ. 11000/- ಮತ್ತು 13000/-ಗಳ ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿದೆ.

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ 32,000/- (ಮೂವತ್ತೆರಡು ಸಾವಿರ ಮಾತ್ರ).

ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ).

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ).

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ).

ತಾತ್ಕಾಲಿಕ ವ್ಯವಸ್ಥೆಯಡಿ ಹೆಚ್ಚುವರಿ ಕಾರ್ಯಭಾರಕ್ಕೆ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಸಕ್ರಮೀಕರಣ ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಇತರೆ ಸೇವಾ ವಿಷಯಗಳ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ.

ಇಡಿ 328 ಡಿಸಿಇ 2023 (ಇ)

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು